**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಡೂರು**

ಓ.ಎಸ್.ನಂ.113/2021

ಪಿ.ಡಬ್ಲ್ಯು.1

ದಿನಾಂಕ:17.08.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

**ಮುಖ್ಯ ವಿಚಾರಣೆ : ವಾದಿ ಪರವಾಗಿ ಶ್ರೀ ಎಂ.ಎಸ್.ಎಲ್. ವಕೀಲರಿಂದ**

ನಾನು ಈ ದಾವೆಯ ವಾದಿಯ ಮಗನಾಗಿದ್ದು ಹಾಗೂ ವಾದಿಯು ನನಗೆ ವಿಶೇಷ ಅಧಿಕಾರ ಪತ್ರವನ್ನು ಬರೆದುಕೊಟ್ಟಿರುತ್ತಾರೆ. ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನು ಶಪತ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ವಿಷಯಗಳೆಲ್ಲಾ ಸತ್ಯವಾಗಿರುತ್ತವೆ ಹಾಗೂ ಅದರಲ್ಲಿ ನನ್ನ ಸಹಿ ಇರುತ್ತದೆ.

ವಾದಿಯು ಬರೆದುಕೊಟ್ಟಂತಹ ವಿಶೇಷ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ದಿ:05.12.1997 ನೇ ಸಾಲಿನ ನೊಂದಾಯಿತ ಕ್ರಯಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಸರ್ವೇನಂ.15/3 ಪಿ ಗೆ ಸಂಬಂಧಿಸಿದಂತೆ ಕೈ ಬರಹದ ಪಹಣಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಸರ್ವೇನಂ.15/3 ಗೆ ಸಂಬಂಧಿಸಿದಂತೆ ಮೂರು ಕೈ ಬರಹದ ಪಹಣಿಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-4 ರಿಂದ ನಿಪಿ-6 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಕೈಬರಹದ ಹಕ್ಕು ಬದಲಾವಣೆಯ ದೃಢೀಕೃತ ನಕಲನ್ನು ನಿಪಿ-7 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಮೂರು ಸ್ವತ್ತಿನ ಮೇಲೆ ಋಣಭಾರ ರಾಹಿತ್ಯ ಪ್ರಮಾಣಪತ್ರಗಳನ್ನು ನಿಪಿ-8 ರಿಂದ ನಿಪಿ-10 ಎಂದು, ಇಂಡೆಕ್ಸ್ ಆಫ್ ಲ್ಯಾಂಡ್ಸ್ನ ನ್ನು ನಿಪಿ-11 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ರೆಕಾರ್ಡ್ ಆಫ್ ರೈಟ್ಸ್ ನ್ನು ನಿಪಿ-12 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದ ಆರು ಪಕ್ಕಾ ದಾಖಲೆಗಳನ್ನು ನಿಪಿ-13 ಎಂದು, ಆಕಾರ್ ಬಂದನ್ನು ನಿಪಿ-14 ಎಂದು, ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಸಲ್ಲಿಸಿದ

This is a True Copy of the Court Records Online. Authenticated @ districts.ecourtsindia.com/cnr/KACM210003482021/truecopy/order-1.pdf

www.ecourtsindia.com

ಮೇಲ್ಮನವಿಯ ಅಪೀಲು ಮೆಮೋರಂಡಮ್ ನ್ನು ನಿಪಿ-15 ಎಂದು ಗುರುತಿಸಲಾಯಿತು.

**ಮುಂದುವರಿದ ಮುಖ್ಯ ವಿಚಾರಣೆಗಾಗಿ ಸಮಯ ಕೋರಿದ್ದು, ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸಹಿ/-
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಕಡೂರು

This is a True Copy of the Court Records Online. Authenticated @ districts.ecourtsindia.com/cnr/KACM210003482021/truecopy/order-1.pdf

www.ecourtsindia.com